# ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/67/ಇಎಸ್‌ಟಿ(7)2017 /2134

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 27/10/2017.

## ಸುತ್ತೋಲೆ

**ವಿಷಯ:** ಕರ್ನಾಟಕ ವಿಧಾನ ಸಭೆ ಮತ್ತು ವಿಧಾನ ಪರಿಷತ್ತಿನ ಬೆಳಗಾವಿ ಅಧಿವೇಶನ ಮತ್ತು ಬೆಂಗಳೂರಿನ ಅಧಿವೇಶನಗಳಿಗೆ ಸಂಬಂಧಿಸಿದ ಕಾರ್ಯಗಳನ್ನು ನಿರ್ವಹಿಸುವ ಬಗ್ಗೆ.

-*-

ಬೆಳಗಾವಿಯ ಸುವರ್ಣಸೌಧದಲ್ಲಿ ಮತ್ತು ಬೆಂಗಳೂರಿನ ವಿಧಾನಸೌಧದಲ್ಲಿ ದಿನಾಂಕ: 13-11-2017ರಿಂದ ನಡೆಯಲಿರುವ ಕರ್ನಾಟಕ ವಿಧಾನಸಭೆ ಮತ್ತು ವಿಧಾನಪರಿಷತ್ತಿನ ಅಧಿವೇಶನಗಳು ನಡೆಯುವಷ್ಟು ಕಾಲ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಎಲ್ಲಾ ವಿಭಾಗಗಳ ಅಧಿಕಾರಿಗಳು/ಸಿಬ್ಬಂದಿ ವರ್ಗದವರು ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್‌ಗಳು/ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ/ಚಿತ್ರಕಲಾ ಶಾಲೆ ಹಾಗೂ ಕಾಲೇಜುಗಳಲ್ಲಿ ಪ್ರಿನ್ಸಿಪಾಲರು, ಅಧಿಕಾರಿಗಳು ಮತ್ತು ಕಛೇರಿ ಸಿಬ್ಬಂದಿಯವರು ಕಛೇರಿಯಲ್ಲಿ ಹಾಜರಿರತಕ್ಕದ್ದು ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಪ್ರಶ್ನೆಗಳಿಗೆ/ಗಮನ ಸೆಳೆಯುವ ಸೂಚನೆಗಳಿಗೆ ಉತ್ತರಗಳನ್ನು ತಯಾರಿಸಲು, ಬೆರಳಚ್ಚು ಮಾಡಲು ಹಾಗೂ ಸರ್ಕಾರಕ್ಕೆ ತಲುಪಿಸಲು ಕಛೇರಿ ವೇಳೆಯ ನಂತರವೂ ಸಂಬಂಧಪಟ್ಟ ವಿಭಾಗಗಳಲ್ಲಿ ಹಾಜರಿರತಕ್ಕದ್ದು. ಅಧಿವೇಶನ ಮುಗಿಯುವರೆಗೆ ಯಾವುದೇ ರೀತಿಯ ರಜೆ ಹಾಕಬಾರದು. ಮತ್ತು ವಿಧಾನ ಸಭೆ ಮತ್ತು ವಿಧಾನ ಪರಿಷತ್ತಿನ ಪ್ರಶ್ನೆಗಳಿಗೆ ಉತ್ತರಗಳನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಪೂರಕ ಟಿಪ್ಪಣಿಗಳೊಂದಿಗೆ ತಯಾರಿಸಿ ಕೊಡತಕ್ಕದ್ದು. ಇಲ್ಲವಾದಲ್ಲಿ ಮುಂದಿನ ಆಗು ಹೋಗುಗಳಿಗೆ ಸಂಬಂಧಪಟ್ಟ ಅಧಿಕಾರಿ/ಸಿಬ್ಬಂದಿಯವರನ್ನು ಜವಾಬ್ದಾರರನ್ನಾಗಿ ಮಾಡಲಾಗುವುದು.

ನಿರ್ದೇಶಕರು

ಇವರಿಗೆ,

ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳು/ಸಿಬ್ಬಂದಿಯವರಿಗೆ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್‌ಗಳು/ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ/ಚಿತ್ರಕಲಾ ಶಾಲೆ ಹಾಗೂ ಕಾಲೇಜುಗಳಲ್ಲಿ ಪ್ರಿನ್ಸಿಪಾಲರು, ಅಧಿಕಾರಿಗಳು ಮತ್ತು ಕಛೇರಿ ಸಿಬ್ಬಂದಿಯವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

**ಪ್ರತಿ ಮಾಹಿತಿಗಾಗಿ:**

1. ಇ-ಆಡಳಿತ ಘಟಕಕ್ಕೆ - ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
2. ನಿರ್ದೇಶಕರ ಆಪ್ತಶಾಖೆಗೆ.

R memo